# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 506**
**ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
**ಉತ್ತರಿಸುವ ದಿನಾಂಕ : 14.08.2025**
**ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಐನಾಪುರ ಗ್ರಾಮದಲ್ಲಿ ಮುಲ್ಲಾಮಾರಿ ಏತ ನೀರಾವರಿ ಯೋಜನೆಗಾಗಿ ಎರಡು ದಶಕದಿಂದ ಈ ಭಾಗದ ರೈತ ಸಂಘದ ಮುಖಂಡರು ಹಾಗೂ ರೈತರು ಹೋರಾಟ ನಡೆಸಿದರೂ ಕೂಡಾ ಇದುವರೆವಿಗೂ ಯೋಜನೆಗೆ ಚಾಲನೆ ನೀಡದಿರಲು ಕಾರಣವೇನು; | ಕಲಬುರಗಿ ಜಿಲ್ಲೆ ಚಿಂಚೋಳಿ ತಾಲ್ಲೂಕಿನ ರೂ.204.10 ಕೋಟಿ ಮೊತ್ತದ (2018-19 ನೇ ಸಾಲಿನ ದರಪಟ್ಟಿಯನ್ವಯ) ಐನಾಪುರ ಏತ ನೀರಾವರಿ ಯೋಜನೆಗೆ ದಿನಾಂಕ:09.01.2023 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಮೊದಲನೇ ಹಂತದಲ್ಲಿ ರೂ.125.25 ಕೋಟಿ ಹಾಗೂ ಎರಡನೇ ಹಂತದಲ್ಲಿ ರೂ.78.85 ಕೋಟಿ ಮೊತ್ತದಲ್ಲಿ ಕಾಮಗಾರಿ ಕೈಗೊಳ್ಳಲು ಮತ್ತು ಮೊದಲನೇ ಹಂತದ ಕಾಮಗಾರಿಗಳಿಗೆ ಮಾತ್ರ ಟೆಂಡರ್ ಪ್ರಕ್ರಿಯೆ ಕೈಗೊಳ್ಳಲು ಅನುಮೋದನೆ ನೀಡಲಾಗಿರುತ್ತದೆ.<br><br>ಮೊದಲನೇ ಹಂತದ ರೂ.94.16 ಕೋಟಿ + ಜಿಎಸ್‌ಟಿ ಮೊತ್ತದ ಕಾಮಗಾರಿಯ ಟೆಂಡರ್ ಅನ್ನು ಮೆ\|\| ಎಸ್.ಎಂ.ಸಿ. ಪ್ರಾಜೆಕ್ಟ್ಸ್ ಇವರಿಗೆ ವಹಿಸಲಾಗಿದ್ದು, ಸದರಿ ಕಾಮಗಾರಿಯನ್ನು ಟೆಂಡರ್ ಗುತ್ತಿಗೆ ನಿಯಮಾವಳಿಯನ್ವಯ 18 ತಿಂಗಳುಗಳ ಕಾಲಾವಧಿಯಲ್ಲಿ ಪೂರ್ಣಗೊಳಿಸಬೇಕಾಗಿರುತ್ತದೆ. |
| ಆ) | ಸದರಿ ಏತ ನೀರಾವರಿ ಯೋಜನೆ ಜಾರಿಗೊಳಿಸಿ ಕಾಮಗಾರಿ ಪ್ರಾರಂಭಿಸಲು ಸರ್ಕಾರ ಇದುವರೆವಿಗೂ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; | |
| ಇ) | ಈ ಯೋಜನೆಗೆ ಈಗಾಗಲೇ ಸರ್ಕಾರ ಟೆಂಡರ್ ಕರೆಯಲಾಗಿದೆಯೇ; ಯೋಜನೆಗೆ ತಗಲುವ ವೆಚ್ಚ ಎಷ್ಟು; ಟೆಂಡರ್ ಪಡೆದ ಗುತ್ತಿಗೆದಾರರಿಗೆ ಯಾವ ಕಾಲ ಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಬೇಕೆಂದು ತಿಳಿಸಲಾಗಿದೆ? (ಗುತ್ತಿಗೆ ಪಡೆದವರ ವಿವರ ನೀಡುವುದು) | |

**ಸಂಖ್ಯೆ:ಜಸಂಇ 96 ಎಂಎಲ್‌ಎ 2025**

**(ಡಿ.ಕೆ. ಶಿವಕುಮಾರ್)**
**ಉಪ ಮುಖ್ಯಮಂತ್ರಿ**